ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಎಸ್. ಸಿ. ಪಿ/ಟಿ. ಎಸ್. ಪಿ ಕಾಮಗಾರಿಗಳ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ ಚುನಾಯಿತರಾದವರು) -

1008 (1209) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕಳೆದ ಮೂರು ವರ್ಷಗಳಿಂದ ಬೀದರ್ ಜಿಲ್ಲೆಗೆ ಎಸ್. ಸಿ. ಪಿ/ಟಿ. ಎಸ್. ಪಿ ಯೋಜನೆಯಡಿಯಲ್ಲಿ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; (ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ಕಾಮಗಾರಿಯ ಸ್ಥಳ, ಗ್ರಾಮಗಳು, ಕಾಮಗಾರಿಗೆ ತಗುಲಿದ ವೆಚ್ಚ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರುಗಳೊಂದಿಗೆ ಆಯಾ ವಿಧಾನ ಸಭಾ ಕ್ಷೇತ್ರವಾರು, ವರ್ಷವಾರು ಮಾಹಿತಿ ಒದಗಿಸುವುದು)

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳ ಕಾಲೋನಿಗಳಲ್ಲಿ ಕೈಗೊಳ್ಳದೇ ಬೇರೆ ಬೇರೆ ಕಡೆಗಳಲ್ಲಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿ/ನೌಕರರ ವಿರುದ್ಧ ಯಾವ ಶಿಸ್ತು ಕ್ರಮ ಕೈಗೊಳ್ಳಲಾಗಿದೆ? (ಮಾಹಿತಿ ಒದಗಿಸುವುದು)